ಇ) ಸ್ವಂತ ನಿವೇಶನ ಹೊಂದಿಲ್ಲದಿರುವ ಈ ಕಾಲೇಜಿಗೆ ಸ್ವಂತ ನಿವೇಶನ ದೊರೆತ ಕೂಡಲೇ ಆಟದ ಮೈದಾನ ವ್ಯವಸ್ಥೆ, ಕಲ್ಪಿಸಲು ಅಗತ್ಯ ಕ್ರಮಕೈಗೊಳ್ಳಲಾಗುವುದು. ಪ್ರಸ್ತುತ ಸರ್ಕಾರಿ ಪದವಿ ಪೂರ್ವ ಮಹಿಳಾ ಕಾಲೇಜಿನಲ್ಲಿ ತರಗತಿಗಳು ನಡೆಯುತ್ತಿದ್ದು, ಸದರಿ ಕಾಲೇಜಿನ ಆಟದ ಮೈದಾನವನ್ನು ಪದವಿ ವಿದ್ಯಾರ್ಥಿನಿಯರ ಕ್ರೀಡಾ ಚಟುವಟಿಕೆಗಳಿಗೆ ಉಪಯೋಗಿಸಲಾಗುತ್ತಿದೆ.

ಕಾಲೇಜು ಅಭಿವೃದ್ಧಿ ಸಮಿತಿಗಳು

1386(1409); ಶ್ರೀ ಯೋಬೋ ಜೆ.ಆರ್. (ಮಂಗಳೂರು ನಗರ ದಕ್ಷಿಣ)

ಅ) ಸರ್ಕಾರಿ ಪದವಿ ಕಾಲೇಜುಗಳಲ್ಲಿ ಶಾಸಕರ ಅಧ್ಯಕ್ಷತೆಯಲ್ಲಿ ಇರುವ ಕಾಲೇಜು ಅಭಿವೃದ್ಧಿ ಸಮಿತಿಯ ಕಾರ್ಯಭಾರ ಏನು;

ಆ) ಕಾಲೇಜು ಅಭಿವೃದ್ಧಿ ಸಮಿತಿಯ ಖಾತೆಯು ಈ ಹಿಂದೆ ಕಾಲೇಜು ಪ್ರಾಂಶುಪಾಲರು ಹಾಗೂ ಶಾಸಕರ ಜಂಟಿ ಸಹಿಯಲ್ಲಿ ನಿರ್ವಹಿಸುತ್ತಿರುವುದನ್ನು ಈಗ ಪ್ರಾಂಶುಪಾಲರ ಸಹಿಯಲ್ಲೇ ನಿರ್ವಹಿಸಲು ಸರ್ಕಾರ ಅನುಮತಿ ನೀಡಿರುವುದು ಸರಿಯೇ;

ಇ) ಶಾಸಕರ ಗಮನಕ್ಕೆ ಬಾರದೇ, ಅಭಿವೃದ್ಧಿ ಸಮಿತಿಯ ಒಪ್ಪಿಗೆ ಪಡೆಯದೆ, ಪ್ರಾಂಶುಪಾಲರೇ ಈ ಖಾತೆಗಳಿಂದ ಹಣ ತೆಗೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ರೀತಿ ಖಾತೆಗಳ ವ್ಯವಹಾರ ಮಾಡಿರುವುದರ ವಿರುದ್ಧ ಸರ್ಕಾರ ಏನು ಕ್ರಮ ಕೈಗೊಂಡಿದೆ;

ಈ) ಕಾಲೇಜು ಅಭಿವೃದ್ಧಿ ಸಮಿತಿಯ ಬ್ಯಾಂಕ್ ಖಾತೆಯನ್ನು ನಿರ್ವಹಣೆ ಮಾಡುವ ಕುರಿತು ಸರ್ಕಾರ ಮಾರ್ಗಸೂಚಿಗಳನ್ನು ಹೊರಡಿಸಿದೆಯೇ; ಹಾಗಿದ್ದಲ್ಲಿ, ಅದರ ಪ್ರತಿ ಒದಗಿಸುವುದು?

ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಸಚಿವರು)

ಅ) ಕಾಲೇಜು ಅಭಿವೃದ್ಧಿ ಸಮಿತಿಯು ಕಾಲೇಜಿನ ಕಟ್ಟಡ, ಪೀಠೋಪಕರಣ ವ್ಯವಸ್ಥೆ, ಗ್ರಂಥಾಲಯ ವ್ಯವಸ್ಥೆ ಇವುಗಳ ಸಂಬಂಧ ಸಂಪನ್ಮೂಲ ಸಂಗ್ರಹಣೆ ಹಾಗೂ ಇನ್ನಿತರ ರಚನಾತ್ಮಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದಲ್ಲದೆ ಕಾಲೇಜಿನ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸುವುದು.

ಆ) ಈ ಹಿಂದೆ ಕಾಲೇಜು ಅಭಿವೃದ್ಧಿ ಸಮಿತಿಯ ಖಾತೆಯನ್ನು ನಿರ್ವಹಿಸುವ ಬಗ್ಗೆ ಯಾವುದೇ ಸ್ಪಷ್ಟ ಆದೇಶ / ನಿರ್ದೇಶನ ಇಲ್ಲದೇ ಇದ್ದುದರಿಂದ ಕೆಲವು ಕಾಲೇಜುಗಳಲ್ಲಿ ಮಾತ್ರ ಕಾಲೇಜು ಅಭಿವೃದ್ಧಿ ಸಮಿತಿಯ ಸಹಮತಿಯೊಂದಿಗೆ ಕಾಲೇಜು ಅಭಿವೃದ್ಧಿ ಸಮಿತಿಯ ಅಧ್ಯಕ್ಷರಾಗಿರುವ ಶಾಸಕರು ಅಥವಾ ಶಾಸಕರು ಸೂಚಿಸುವ ಮತ್ತೊಬ್ಬ ಸದಸ್ಯರು ಮತ್ತು ಪ್ರಾಂಶುಪಾಲರ ಜಂಟಿ ಸಹಿಯಲ್ಲಿ ಹಾಗೂ ಇನ್ನೂ ಕೆಲವು ಕಾಲೇಜುಗಳಲ್ಲಿ ಶಾಸಕರ ಅನುಮತಿಯ ಮೇರೆಗೆ ಪ್ರಾಂಶುಪಾಲರ ಸಹಿಯಲ್ಲಿ ಕಾಲೇಜು ಅಭಿವೃದ್ಧಿ ಸಮಿತಿಯ ಖಾತೆಯನ್ನು ನಿರ್ವಹಿಸುತ್ತಿದ್ದರು.

ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 33 ಯುಇಸಿ 2012, ದಿನಾಂಕ:07–08–2012 ರಲ್ಲಿ ಕಾಲೇಜು ಅಭಿವೃದ್ಧಿಯ ಹೆಸರಿನಲ್ಲಿ ಸಂಗ್ರಹಿಸಲಾದ ಹಣವನ್ನು ಪ್ರಾಂಶುಪಾಲರು ಪ್ರತ್ಯೇಕ ಬ್ಯಾಂಕ್ ಖಾತೆಯನ್ನು ತೆರೆದು ದಿನವಹಿ ಹಾಗೂ ನಗದು ಪುಸ್ತಕಗಳನ್ನು ಕಡ್ಡಾಯವಾಗಿ ನಿರ್ವಹಿಸಿ, ಕಾಲೇಜು ಅಭಿವೃದ್ಧಿ ಸಮಿತಿಯ ಸಹಮತಿ ಪಡೆದು ಕಾಲೇಜು ಅಭಿವೃದ್ಧಿ ಕೆಲಸಗಳಿಗೆ ಮಾತ್ರ ಉಪಯೋಗಿಸಲು ತಿಳಿಸಲಾಗಿದೆ.

ಇ) ಬಂದಿರುವುದಿಲ್ಲ.

ಈ) ಹೌದು.

ಅನುಬಂಧ–1 ರಲ್ಲಿ ಲಗತ್ತಿಸಿದೆ.

ಕರ್ನಾಟಕ ಸರ್ಕಾರ

ಸಂಖ್ಯೆ:ಇಡಿ 33 ಯುಷಿ 2012

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿ:07-08-2012

ಸುತ್ತೋಲೆ

ವಿಷಯ: ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ಕಾಲೇಜು ಅಭಿವೃದ್ಧಿ ಸಮಿತಿಯ ಹೆಸರಿನಲ್ಲಿ ಹಣ ಸಂಗ್ರಹಿಸುವ ಬಗ್ಗೆ.

***

ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ/ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ಕಾಲೇಜು ಅಭಿವೃದ್ಧಿ ಸಮಿತಿಯ ಹೆಸರಿನಲ್ಲಿ ಪ್ರತಿ ವಿದ್ಯಾರ್ಥಿಯಿಂದ ವರ್ಷಕ್ಕೊಮ್ಮೆ ಕಾಲೇಜಿನ ಪ್ರವೇಶಾತಿ ಸಮಯದಲ್ಲಿ ಪ್ರವೇಶ ಶುಲ್ಕದ ಜೊತೆಗೆ ರೂ.150/-ರಿಂದ ರೂ.600/-ರವರೆಗೆ ಮಾತ್ರ ಸಂದರ್ಭಾನುಸಾರ ಕಾಲೇಜು ಅಭಿವೃದ್ಧಿ ಶುಲ್ಕ ಸಂಗ್ರಹಿಸಲು ಸರ್ಕಾರದ ಅನುಮತಿ ನೀಡಲಾಗಿದೆ. ಹಾಗೂ ದಾನಿಗಳಿಂದ, ಸಂಘ ಸಂಸ್ಥೆಗಳಿಂದ, ವಿದ್ಯಾರ್ಥಿಗಳು /ಪೋಷಕರಿಂದ ಹೀಗೆ ಸಂಗ್ರಹಿಸಲಾದ ಹಣಕ್ಕೆ ಕಡ್ಡಾಯವಾಗಿ ರಶೀದಿಯನ್ನು ನೀಡತಕ್ಕದ್ದು. ಸಂಗ್ರಹಿಸಲಾದ ಹಣವನ್ನು ಪ್ರಾಂಶುಪಾಲರು ಪ್ರತ್ಯೇಕ ಬ್ಯಾಂಕ್ ಖಾತೆಯನ್ನು ತೆರೆದು ದಿನವಹಿ ಹಾಗೂ ನಗದು ಪುಸ್ತಕಗಳನ್ನು ಕಡ್ಡಾಯವಾಗಿ ನಿರ್ವಹಿಸಿ ಕಾಲೇಜು ಅಭಿವೃದ್ಧಿ ಸಮಿತಿಯ ಸಹಮತಿ ಪಡೆದು ಕಾಲೇಜಿನ ಅಭಿವೃದ್ಧಿ ಕೆಲಸಗಳಿಗೆ ಮಾತ್ರ ಉಪಯೋಗಿಸಲು ತಿಳಿಸಲಾಗಿದೆ. ಒಂದು ವೇಳೆ ವಿದ್ಯಾರ್ಥಿಗಳಿಂದ ಮೇಲೆ ತಿಳಿಸಲಾದ ಮೊತ್ತಕ್ಕಿಂತ ಹೆಚ್ಚಿನ ಹಣ ಸಂಗ್ರಹಣೆ/ದುರುಪಯೋಗ ಮಾಡಿರುವುದು ಕಂಡುಬಂದಲ್ಲಿ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರನ್ನೇ ನೇರ ಹೊಣೆಗಾರರನ್ನಾಗಿ ಮಾಡಿ ಅವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಈ ಮೂಲಕ ತಿಳಿಸಲಾಗಿದೆ.

ಇದೇ ಸಮಸಂಖ್ಯೆಯ ದಿನಾಂಕ:02-05-2012ರ ಸರ್ಕಾರಿ ಸುತ್ತೋಲೆಯನ್ನು ಹಿಂದಕ್ಕೆ ಪಡೆಯಲಾಗಿದೆ

(ಬಿ.ಮನೋಹರ್)
ಸರ್ಕಾರದ ಅಡಿಷನಲ್ ಕಾರ್ಯದರ್ಶಿ,
ಶಿಕ್ಷಣ ಇಲಾಖೆ. (ಕಾಲೇಜು ಶಿಕ್ಷಣ)

ಇವರಿಗೆ:

1) ಮಹಾಲೇಖಪಾಲರು (ಲೆಕ್ಕಪತ್ರ/ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು
2) ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು
3) ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
4) ಮುಖ್ಯ ಆಡಳಿತಾಧಿಕಾರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು
5) ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರು (ಆಯುಕ್ತರ ಮುಖಾಂತರ)
6) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಹಾಗೂ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ (ಆಯುಕ್ತರ ಮುಖಾಂತರ)
7) ಶಾಖಾ ರಕ್ಷಾ ಕಡತ
8) ಹೆಚ್ಚುವರಿ ಪ್ರತಿಗಳು